ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಮಡಿಕೇರಿ ಮಿನಿ ವಿಧಾನಸೌಧದ ಕಾಮಗಾರಿ ಅಪೂರ್ಣಗೊಂಡಿರುವ ಬಗ್ಗೆ

ಶ್ರೀ ಸುನೀಲ್ ಸುಬ್ರಮಣಿ ಎಂ.ಪಿ. (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

227 (232) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೊಡಗು ಜಿಲ್ಲೆಯ ಮಡಿಕೇರಿಯಲ್ಲಿ ನಿರ್ಮಾಣಗೊಳ್ಳುತ್ತಿರುವ ಮಿನಿ ವಿಧಾನಸೌಧಕ್ಕೆ 2016ರಲ್ಲಿ ಅಡಿಪಾಯ ಹಾಕಲಾಗಿದ್ದು, ಇನ್ನೂ ಸಹ ಕೆಲಸ ಸಂಪೂರ್ಣಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ವಿಳಂಬಕ್ಕೆ ಕಾರಣಗಳೇನು; (ವಿವರ ನೀಡುವುದು)

(ಆ) ಇದು ಸಂಪೂರ್ಣಗೊಳ್ಳಲು ಎಷ್ಟು ಸಮಯಬೇಕು ; (ಗುತ್ತಿಗೆದಾರರ ವಿವರ ಹಾಗೂ ಇವರಿಗೆ ವಿಧಿಸಿರುವ ಷರತ್ತು ನಿಬಂಧನೆಗಳ ವಿವರ ನೀಡುವುದು)

(ಇ) ಪ್ರಸ್ತುತ ಈ ಕಾಮಗಾರಿಯು ಯಾವ ಹಂತದಲ್ಲಿದೆ ಮತ್ತು ಯಾವಾಗ ಈ ಕಾಮಗಾರಿಯನ್ನು ಸಂಪೂರ್ಣಗೊಳಿಸಲಾಗುವುದು? (ಪೂರ್ಣ ಮಾಹಿತಿ ನೀಡುವುದು)